# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 990(1127) |
| ಸದಸ್ಯರ ಹೆಸರು : | ಶ್ರೀಮತಿ ಉಮಾಶ್ರೀ(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ: | 23.02.2024 |
| ಉತ್ತರಿಸುವವರು : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

******

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇರುವ ಎಷ್ಟು ಗ್ರಾಮ ಪಂಚಾಯತಿಗಳಿಗೆ ಕೇಂದ್ರ ಸರ್ಕಾರದ ಯೋಜನೆಯಾದ "ಭಾರತ್ ನೆಟ್" ಯೋಜನೆಯಡಿ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸಲಾಗಿದೆಯೇ; ಇನ್ನೂ ಈ ಸೌಲಭ್ಯವನ್ನು ಒದಗಿಸದಿರುವ ಗ್ರಾಮ ಪಂಚಾಯತಿಗಳು ಎಷ್ಟು; | "ಭಾರತ್ ನೆಟ್" ಯೋಜನೆಯಡಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸಲಾಗಿದೆ. |
| ಆ) | ಕೆಲವು ಗ್ರಾಮ ಪಂಚಾಯತಿಗಳಲ್ಲಿ ಇಂಟರ್‌ನೆಟ್ ಇಲ್ಲದೆ ನೆಟ್‌ವರ್ಕ್ / ಸರ್ವರ್ ಸಮಸ್ಯೆಗಳು ಉಂಟಾಗುತ್ತಿರುವುದರಿಂದ ಸರ್ಕಾರದ ವಿವಿಧ ಸೇವೆಗಳು ಸಾರ್ವಜನಿಕರಿಗೆ ನೀಡುವಲ್ಲಿ ಅಡಚಣೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | "ಭಾರತ್ ನೆಟ್" ಯೋಜನೆಯಡಿ ಒದಗಿಸಲಾದ ಇಂಟರ್‌ನೆಟ್‌ನ ನಿರ್ವಹಣೆಯಲ್ಲಿ ಸಮಸ್ಯೆಗಳಿದ್ದು, ಅಂತಹ ಸಮಸ್ಯೆಗಳಿರುವ ಗ್ರಾಮ ಪಂಚಾಯತಿಗಳಿಗೆ ಪರ್ಯಾಯ ಇಂಟರ್‌ನೆಟ್ ಸೌಲಭ್ಯ ಪಡೆದು ಬಳಕೆ ಮಾಡಲಾಗುತ್ತಿದೆ. |

.....2

| | | |
|---|---|---|
| ಇ) | ಯಾವ ಕಾಲಮಿತಿಯಲ್ಲಿ ಉಳಿದ ಗ್ರಾಮ ಪಂಚಾಯತಿಗಳಿಗೆ ಭಾರತ್‌ನೆಟ್ ಯೋಜನೆಯಡಿ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸಲಾಗುವುದು? (ವಿವರ ನೀಡುವುದು) | ಅನ್ವಯಿಸುವುದಿಲ್ಲ. |

ಸಂಖ್ಯೆ: ಗ್ರಾಅಪ/32/ಇ-ಆಡಳಿತ/2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು
ಪಂ.ರಾಜ್ ಹಾಗೂ ಮಾಹಿತಿ
ತಂತ್ರಜ್ಞಾನ ಮತ್ತು ಜೈವಿಕ
ತಂತ್ರಜ್ಞಾನ ಸಚಿವರು.